**1 ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು**

ಸ್ಪೆಷಲ್ ನಂಃ 83/2020

| | | |
|---|---|---|
| ಸಾಕ್ಷಿದಾರರ ಹೆಸರು | - ಪ್ರಕಾಶ್ | ಪಿಡಬ್ಲೂ - 9 |
| ತಂದೆಯ ಹೆಸರು | - ಕೆ ಎಸ್ ಬಸಪ್ಪ | ಸಿಡಬ್ಲೂ - 11 |
| ವಯಸ್ಸು | - 49 ವರ್ಷ | |
| ಉದ್ಯೋಗ | - ಮುಖ್ಯ ಪೇದೆ, ಸಖರಾಯಪಟ್ಟಣ ಪೊಲೀಸ್ ಠಾಣೆ | |
| ವಾಸ ಸ್ಥಳ | - ಸಖರಾಯಪಟ್ಟಣ | |

ದಿನಾಂಕಃ20.07.2024 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

1. ನಾನು 2015 ರಿಂದ 2021 ರವರೆಗೆ ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ಮುಖ್ಯಪೇದೆಯಾಗಿ ಕಾರ್ಯ ನಿರ್ವಹಿಸಿದ್ದೇನೆ.

2. ದಿನಾಂಕಃ 06.05.2020 ರಂದು ನಾನು ಠಾಣಾಧಿಕಾರಿಯಾಗಿ ಕರ್ತವ್ಯದಲ್ಲಿ ಇದ್ದ ಸಮಯದಲ್ಲಿ ರಾತ್ರಿ 9.30 ಗಂಟೆ ಸಮಯದಲ್ಲಿ ಕೆಂಚಿಕೊಪ್ಪ ಗ್ರಾಮದ ವಾಸಿಯಾದ ಫ್ರಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಪಡೆದು ಅದರ ಮೇರೆಗೆ ಠಾಣಾ ಮೊಕದ್ದಮೆ ಸಂಖ್ಯೆಃ 50/2020 ರಲ್ಲಿ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ ದೂರನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು

ಗುರುತಿಸಲಾಯಿತು. ನಾನು ದಾಖಲು ಮಾಡಿದ್ದ ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ.11 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.11(ಎ) ಎಂದು ಗುರುತಿಸಲಾಯಿತು. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.12 ರವರಿಗೆ ನೀಡಿರುತ್ತೇನೆ.

<u>ಪಾಟೀ ಸವಾಲುಃ ಶ್ರೀ ಬಿ ಎಂ ಎಲ್ ಜೆ ವಕೀಲರಿಂದ – ಆರೋಪಿಯ ಪರವಾಗಿ</u>

3. ದಿನಾಂಕಃ 06.05.2020 ರಂದು ನಾನು ಠಾಣಾಧಿಕಾರಿಯಾಗಿ ಕರ್ತವ್ಯದಲ್ಲಿ ಇದ್ದ ಸಮಯದಲ್ಲಿ ರಾತ್ರಿ 9.30 ಗಂಟೆ ಸಮಯದಲ್ಲಿ ಕೆಂಚಿಕೊಪ್ಪ ಗ್ರಾಮದ ವಾಸಿಯಾದ ಫ್ರಾಸಾ.1 ರವರು ಠಾಣೆಗೆ ಹಾಜರಾಗಿ ನಿಪಿ.1 ರಂತೆ ದುಹುರನ್ನು ನೀಡಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ನೀವು ಹೇಳಿದಂತೆ ಫ್ರಾಸಾ.1 ರವರು ಯಾವುದೇ ದೂರನ್ನು ನೀಡದೇ ಇದ್ದರೂ ಸಹ ನಿಪಿ.11 ರಂತೆ ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ಭಾನುಮತಿ ಬಿ.ಸಿ)

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ